ಮೂಲ ದಾವಾ ಸಂಖ್ಯೆ 21/2018

ಪಿ.ಡಬ್ಲ್ಯೂ-1

**<u>ದಿಃ 15.11.2022 ರಂದು ಸಾಕ್ಷಿಯನ್ನು ಪುನಃ ಕರೆಯಿಸಿ ಪ್ರಮಾಣೀಕರಿಸಲಾಯಿತು.</u>**

**<u>ಪಾಟೀ ಸವಾಲುಃ ಪ್ರತಿವಾದಿಪರ ಶ್ರೀ ಆನಂದ ವಕೀಲರಿಂದಃ -</u>**

ನಿಮ್ಮ ಮೂಲ ವಾಸ ಕೋಗಳಿ ಗ್ರಾಮ ಎಂದರೆ ಸರಿ. ಸದರಿ ಗ್ರಾಮ ಕೊಟ್ಟೂರು ತಾಲೂಕು ಮೊದಲು ಹಗರಿಬೊಮ್ಮನಹಳ್ಳಿ ಇತ್ತು ಎನ್ನುತ್ತಾರೆ. ನಾನು 8 ನೇ ತರಗತಿ ಓದಿರುತ್ತೇನೆ. ನನಗೆ ಕನ್ನಡ ಇಂಗ್ಲೀಷ್ ಓದಲು ಬರೆಯಲು ಬರುತ್ತದೆ. ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರವನ್ನು ಬರೆಸಲು ನಮ್ಮ ವಕೀಲರು ಬರೆಸಿರುತ್ತಾರೆ. ನಿಮ್ಮ ವಕೀಲರು ಮಾಹಿತಿ ಕೊಟ್ಟಿದ್ದ ಕಾರಣ ನಿಮ್ಮ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲಾ ಎಂದರೆ ಸರಿ. ಯಾವ ವಿಷಯಕ್ಕೆ ಸಂಬಂಧಪಟ್ಟಂತೆ ನಿಮ್ಮ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ಬರೆದಿದೆ ಎಂದು ನಿಮಗೆ ಗೊತ್ತಿಲ್ಲಾ ಎಂದರೆ ಸರಿಯಲ್ಲ. ಆಸ್ತಿಯ ವಿಚಾರಕ್ಕೆ ಸಂಬಂಧಪಟ್ಟಂತೆ ಬರೆಯಲಾಗಿದೆ ಎನ್ನುತ್ತಾರೆ. ನೀವು ಹುಟ್ಟಿದಾಗಿನಿಂದಲೂ ಕೂಡ ಕೋಗಳಿ ಗ್ರಾಮದಲ್ಲಿ ವಾಸವಾಗಿದ್ದೀರಾ ಎಂದರೆ ಸರಿ.

**(ಮುಂದುವರಿದ ಪಾಟೀ ಸವಾಲಿಗೆ ಪ್ರತಿವಾದಿ ಪರ ವಕೀಲರು ಸಮಯವಕಾಶ ಕೋರಿದ್ದು ಅನುಮತಿಸಲಾಯಿತು.)**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸರಿ ಇದೆ .

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ಹರಪನಹಳ್ಳಿ.